ೋಕಾಯುಕ್ತ ನ್ಯಾ. ವಿಶ್ವನಾಥ ಶೆಟ್ಟಿ ಮಹತ್ವದ ಆದೇಶ

# ಾಲಿಕೆ ಸದಸ್ಯರ ಆಸ್ತಿ ವಿವರ ಸಲ್ಲಿಕೆ ಇನ್ಮುಂದೆ ಕಡ್ಡಾಯ

ತ ಸುದ್ದಿಲೋಕ ಬೆಂಗಳೂರು

ದ ಎಲ್ಲಾ ಮಹಾನಗರ ಪಾಲಿಕೆ ಮತ್ತು ನಗರ ಯ ಸಂಸ್ಥೆ ಸದಸ್ಯರು ಆಸ್ತಿ ವಿವರ ಸಲ್ಲಿಸುವುದು ಕಡ್ಡಾಯ ಎಂದು ಲೋಕಾಯುಕ್ತ ನ್ಯಾಯಮೂರ್ತಿ ಪಿ.ವಿಶ್ವನಾಥ ಶೆಟ್ಟಿ ಅವರು ಬುಧವಾರ ಮಹತ್ವದ ಆದೇಶ ಹೊರಡಿಸಿದ್ದಾರೆ.



ಇದುವರೆಗೂ ವಿಧಾನ ಸಭೆ ಮತ್ತು ವಿಧಾನ ಪರಿಷತ್ ರು ಮಾತ್ರ ಪ್ರತಿ ವರ್ಷ ನಿಯಮಿತವಾಗಿ ಆಸ್ತಿ ಸಲ್ಲಿಸುವುದು ಕಡ್ಡಾಯವಾಗಿತ್ತು. ಆದರೆ ಪಿ ಸದಸ್ಯರಾಗಲೀ, ಇತರೆ ಮಹಾನಗರ ಕೆ ಸದಸ್ಯರಾಗಲೀ ಆಸ್ತಿ ವಿವರ ಸ್ತಿರಲಿಲ್ಲ. ಸಾಮಾಜಿಕ ಕಾರ್ಯಕರ್ತ ಎಚ್. ಂಕಟೇಶ್ ಲೋಕಾಯುಕ್ತಕ್ಕೆ ದೂರು ನೀಡಿ, ೇರಿದಂತೆ ನಗರ ಸ್ಥಳೀಯ ಸಂಸ್ಥೆ ಸದಸ್ಯರನ್ನೂ ಆಸ್ತಿ ವಿವರ ಸಲ್ಲಿಕೆ ವ್ಯಾಪ್ತಿಗೆ ತರಬೇಕು ಎಂದು ದ್ದರು. ಈ ಅರ್ಜಿಯ ವಿಚಾರಣೆ ನಡೆಸಿದ ಯುಕ್ತ ನ್ಯಾಯಮೂರ್ತಿಗಳು ಬುಧವಾರ ೇಶ ಹೊರಡಿಸಿದ್ದಾರೆ.

## ಅರ್ಜಿಯಲ್ಲಿ ಏನಿತ್ತು?

1984ರಲ್ಲಿ ಜಾರಿಗೆ ಬಂದ ಲೋಕಾಯುಕ್ತ ಕಾಯಿದೆ ಪ್ರಕಾರ, ಬಿಬಿಎಂಪಿ ಸೇರಿ ರಾಜ್ಯದ ಎಲ್ಲಾ ಪಾಲಿಕೆ ಸದಸ್ಯರು ಆಸ್ತಿ ವಿವರ ಸಲ್ಲಿಕೆ ಮಾಡಬೇಕಾಗಿದೆ. ಮಾತ್ರವಲ್ಲದೆ ಸರಕಾರದ ವಿವಿಧ ಸಂಸ್ಥೆಗಳ ಸದಸ್ಯರು, ಅಧ್ಯಕ್ಷರೂ ಸೇರಿದಂತೆ ಇತರೆ ಸೊಸೈಟಿ, ಸಮಿತಿ, ಮಂಡಳಿಗಳ ಸದಸ್ಯರು ಆಸ್ತಿ ವಿವರವನ್ನು ಕಡ್ಡಾಯವಾಗಿ ಸಲ್ಲಿಸಬೇಕು. ಈ ಬಗ್ಗೆ ಅವರಿಗೆ ನಿರ್ದೇಶನ ನೀಡಬೇಕು ಎಂದು ವೆಂಕಟೇಶ್ ಸಲ್ಲಿಸಿದ್ದ ಅರ್ಜಿಯಲ್ಲಿ ಮನವಿ ಮಾಡಿದ್ದರು. ಈ ಸಂಬಂಧ ನಗರಾಭಿವೃದ್ಧಿ ಇಲಾಖೆಯ ಪ್ರಧಾನ ಕಾರ್ಯದರ್ಶಿ ಅವರಿಗೆ ನೋಟಿಸ್ ಜಾರಿ ಮಾಡಿದ್ದ ಲೋಕಾಯುಕ್ತರು ಸಭೆಯನ್ನೂ ನಿಗದಿಪಡಿಸಿದ್ದರು. ಸಂಬಂಧಪಟ್ಟ ಎಲ್ಲಾ ಮಾಹಿತಿಗಳನ್ನು ಸಂಗ್ರಹಿಸಿದ ಬಳಿಕ ಬುಧವಾರ ಲೋಕಾಯುಕ್ತರ ಆದೇಶ ಹೊರ ಬಿದ್ದಿದೆ. ಹೀಗಾಗಿ, ಇನ್ನು ಮುಂದೆ ಬಿಬಿಎಂಪಿ ಸೇರಿದಂತೆ ರಾಜ್ಯದ ಇತರೆ ಪಾಲಿಕೆ ಸದಸ್ಯರು ಮತ್ತು ನಗರ ಸ್ಥಳೀಯ ಸಂಸ್ಥೆ ಸದಸ್ಯರು ಆಸ್ತಿ ವಿವರಗಳನ್ನು ಕಡ್ಡಾಯವಾಗಿ ಸಲ್ಲಿಸಬೇಕಿದೆ.